RNU AIR DHARWAD

# AUGUST 11, 2024

## AKASHAVANI - DHARWAD

## PRADESH SAMACHARA (KANNADA) 7:05 AM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **ರಾಜ್ಯದ ಘಟ್ಟ ಪ್ರದೇಶದಲ್ಲಿ,** ಭೂ ಕುಸಿತ ತಡೆಗಟ್ಟಲು, ಹೊಸ ನೀತಿ ಜಾರಿಗೆ – ಕೃಷ್ಣ ಬೈರೇಗೌಡ.
- **ಭದ್ರಾವತಿಯ ಕಬ್ಬಿಣ ಮತ್ತು ಉಕ್ಕು** ಕಾರ್ಖಾನೆ ಪುನಾರಂಭಕ್ಕೆ, ಕೇಂದ್ರದ ಸಹಕಾರ ಅಗತ್ಯ – ಎಂ.ಬಿ. ಪಾಟೀಲ.
- **ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ,** ಮಕ್ಕಳ ಸಮಸ್ಯೆ ಗಂಭೀರವಾಗಿ ಪರಿಗಣನೆ – ವೆಂಕಟೇಶ.
- **"ದೇಖೋ ಅಪ್ನಾ ದೇಶ್, ಪೀಪಲ್ಸ್ ಚಾಯ್ಸ್":** ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ, ವಿನೂತನ ಆಂದೋಲನ.

<><><>

**ಈಗ ವಾರ್ತೆಗಳ ವಿವರ**

<><><>

**ರಾಜ್ಯದ ಘಟ್ಟ ಪ್ರದೇಶದಲ್ಲಿ,** ಭೂ ಕುಸಿತ ತಡೆಗಟ್ಟಲು, ಅಭಿವೃದ್ಧಿ ಕೇಂದ್ರಿತ ಚಟುವಟಿಕೆ ನಿಯಂತ್ರಿಸುವ ನೀತಿಯೊಂದನ್ನು ರೂಪಿಸಲಾಗುತ್ತಿದೆ ಎಂದು, ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಗುಡ್ಡಗಳನ್ನು ಲಂಬ ಕೋನದಲ್ಲಿ ಕಡಿದು, ನಿರ್ಮಾಣ ಚಟುವಟಿಕೆ ಕೈಗೊಳ್ಳುವುದು ಸೇರಿದಂತೆ, ಅವೈಜ್ಞಾನಿಕ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ಬಂಧಿಸಲು ಉದ್ದೇಶಿಸಲಾಗಿದೆ ಎಂದು, ಕೃಷ್ಣ ಬೈರೇಗೌಡ ಜಾಲತಾಣ ಎಕ್ಸ್‌ನಲ್ಲಿ ಹೇಳಿದ್ದಾರೆ.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ,** ರಾಜ್ಯದ ಗಡಿಗೆ ಹೊಂದಿಕೊಂಡ, ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂ ಕುಸಿತ ಪ್ರದೇಶದ, ವೈಮಾನಿಕ ಸಮೀಕ್ಷೆ ನಡೆಸಿದರು. ನೈಸರ್ಗಿಕ ವಿಕೋಪಕ್ಕೆ ತುತ್ತಾದ ಪ್ರದೇಶವನ್ನು ವೀಕ್ಷಿಸಿದರು. ಸೇನೆ ಮತ್ತು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಗಳಿಂದ ಕೈಗೊಳ್ಳಲಾದ ರಕ್ಷಣಾ ಕಾರ್ಯಾಚರಣೆಯ ಮಾಹಿತಿ ಪಡೆದರು. ಪರಿಹಾರ ಶಿಬಿರಕ್ಕೆ ಭೇಟಿ ನೀಡಿದ ಪ್ರಧಾನಮಂತ್ರಿ, ಸಂತ್ರಸ್ತರನ್ನು ಸಂತೈಸಿದರು. ಆಸ್ಪತ್ರೆಗೆ ಭೇಟಿ ನೀಡಿ, ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

<><><>

**ಶಿವಮೊಗ್ಗ ಜಿಲ್ಲೆ, ಭದ್ರಾವತಿಯ** ವಿ.ಐ.ಎಸ್.ಎಲ್. ಕಾರ್ಖಾನೆ ಪುನಾರಂಭವಾಗಬೇಕು ಎಂಬುದು, ಸರ್ಕಾರದ ಆಶಯ. ಎಚ್.ಡಿ. ಕುಮಾರಸ್ವಾಮಿ ಅವರು, ಕೇಂದ್ರದಲ್ಲಿ ಉಕ್ಕು ಖಾತೆ ಸಚಿವರಾಗಿದ್ದು, ಶೀಘ್ರ ಕಾಯಕಲ್ಪ ಸಿಗುವ ನಿರೀಕ್ಷೆ ಇದೆ ಎಂದು, ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಾರ್ಖಾನೆ ಕಾರ್ಯಾರಂಭಿಸಲು ಸೂಕ್ತ ಅನುದಾನ, ಕಚ್ಚಾ ಸಾಮಗ್ರಿ ಮತ್ತು ತಾಂತ್ರಿಕ ನೆರವನ್ನು ನೀಡಲು, ಕೇಂದ್ರ ಸರ್ಕಾರ ಕೈಜೋಡಿಸಿದರೆ, ರಾಜ್ಯ ಸರ್ಕಾರ ಸಹ ಅಗತ್ಯ ಸಹಕಾರ ನೀಡಲಿದೆ ಎಂದರು. ಮೈಸೂರು ಪೇಪರ್ ಮಿಲ್ ಕಾರ್ಖಾನೆ ಆರಂಭವಾದರೆ, ರಾಜ್ಯಕ್ಕೆ ಅನುಕೂಲ. ಈ ಕಾರ್ಖಾನೆಗೆ ಅಗತ್ಯವಿರುವ ನೀಲಗಿರಿ ಮತ್ತು ಅಕೇಶಿಯಾ ಮರಗಳನ್ನು ಬೆಳೆಯಲು, ರಾಜ್ಯದಲ್ಲಿ ನಿಷೇಧವಿದೆ. 30 ಸಾವಿರ ಹೆಕ್ಟರ್ ಪ್ರದೇಶದಲ್ಲಿ, ನೀಲಗಿರಿ ಮತ್ತು ಅಕೇಶಿಯಾ ಬೆಳೆಯಲಾಗುವ, ಭೂಮಿಯ ಗುತ್ತಿಗೆ ವಿಸ್ತರಣೆಗೆ, ತೀರ್ಮಾನ ಅಂತಿಮವಾಗಿಲ್ಲ ಎಂದು ಸಚಿವ ಎಂ.ಬಿ. ಪಾಟೀಲ ತಿಳಿಸಿದರು.

<><><>

**78ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ,** ಚಿತ್ರದುರ್ಗ ತಾಲೂಕಿನ ಕೂನಬೇವು ಗ್ರಾಮದ, ಸ್ವಾತಂತ್ರ್ಯ ಹೋರಾಟಗಾರ ಭೀಮಪ್ಪ ವೆಂಕಟಪ್ಪ ಅವರಿಗೆ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಜಿಲ್ಲಾಡಳಿತದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿದರು.

<><><>

**ಯಾದಗಿರಿ ಜಿಲ್ಲೆ, ಹುಣಸಗಿ ತಾಲೂಕಿನ** ಕೊಡೇಕಲ್ ಗ್ರಾಮದ ಸ್ವಾತಂತ್ರ್ಯ ಹೋರಾಟಗಾರ ಸಂಗಪ್ಪ ಮಂಟೆ ಅವರನ್ನು, ಜಿಲ್ಲಾಧಿಕಾರಿ ಬಿ. ಸುಶೀಲಾ, ಜಿಲ್ಲಾಡಳಿತದ ಪರವಾಗಿ ಗೌರವಿಸಿದರು.

<><><>

**ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ವೃತ್ತದ** ಟಿ.ಚನ್ನಯ್ಯ ಉದ್ಯಾನವನದಲ್ಲಿ, ಹರ್ ಘರ್ ತಿರಂಗಾ ಅಭಿಯಾನದ ಸಾಕ್ಷ್ಯಚಿತ್ರ ಪ್ರದರ್ಶಿಸಲಾಯಿತು.

**ಚಿಂತಾಮಣಿಯಲ್ಲಿ, ಹರ್ ಘರ್ ತಿರಂಗಾ** ಸೆಲ್ಫೀ ಬೂತ್‌ನಲ್ಲಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೆಲ್ಫೀ ತೆಗೆದುಕೊಂಡು ಸಂಭ್ರಮಿಸಿದರು.

**ಗೌರಿಬಿದನೂರಿನಲ್ಲಿ ಶಾಸಕ ಪುಟ್ಟಸ್ವಾಮಿಗೌಡ** ಹಾಗೂ ಜನಪ್ರತಿನಿಧಿಗಳು, ದ್ವಿಚಕ್ರ ವಾಹನ ಜಾಥಾದಲ್ಲಿ ಪಾಲ್ಗೊಂಡು, ರಾಷ್ಟ್ರಧ್ವಜ ಪ್ರದರ್ಶಿಸಿದರು.

<><><>

**ಹರ್ ಘರ್ ತಿರಂಗಾ ಅಭಿಯಾನ'ದಲ್ಲಿ** ಎಲ್ಲರೂ ಕೂಡ, ತ್ರಿವರ್ಣ ಧ್ವಜವನ್ನು ಹಾರಿಸಿ, ತಮ್ಮ ಸೆಲ್ಫಿಗಳನ್ನು har ghar tiranga.com ನಲ್ಲಿ ಹಂಚಿಕೊಳ್ಳುವಂತೆ, ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎನ್.ಶಿವಶಂಕರ್ ಕೋರಿದ್ದಾರೆ.

<><><>

**ರಾಷ್ಟ್ರೀಯ ಸೇವಾ ಯೋಜನೆ – ಎನ್.ಎಸ್.ಎಸ್** ಸ್ವಯಂಸೇವಕರಾದ, ರೇಣುಕಾ ಸುರೇಶ ಮಾದಪ್ಪಗೌಡರ ಹಾಗೂ ವಿನಾಯಕ ಮಹಾವೀರ ಮುನವಳ್ಳಿ ಅವರಿಗೆ, ಹೊಸ ದಿಲ್ಲಿಯ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪಾಲ್ಗೊಳ್ಳಲು, ಪ್ರಧಾನಮಂತ್ರಿ ನರೇಂದ್ರ ಮೋದಿ ಆಹ್ವಾನಿಸಿದ್ದಾರೆ. ಉತ್ತರಕನ್ನಡ ಜಿಲ್ಲೆ, ಹಳಿಯಾಳ ತಾಲೂಕಿನ, ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ, ವಾಣಿಜ್ಯ ವಿಭಾಗದಲ್ಲಿ, ದ್ವಿತೀಯ ವರ್ಷ ವ್ಯಾಸಂಗ ನಿರತ ಈ ವಿದ್ಯಾರ್ಥಿಗಳು 'ಮೇರಿ ಮಾಟಿ ಮೇರಾ ದೇಶ್' ಅಭಿಯಾನದಲ್ಲಿ, ಗಮನಾರ್ಹ ಕೆಲಸ ಮಾಡಿದ್ದಾರೆ. ಶಾಸಕ ಆರ್.ವಿ.ದೇಶಪಾಂಡೆ ಅಭಿನಂದಿಸಿದ್ದು, ವಿದ್ಯಾರ್ಥಿನಿ ರೇಣುಕಾ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ವಿದ್ಯಾರ್ಥಿನಿ ರೇಣುಕಾ ಧ್ವನಿ 42 ಸೆಕೆಂದುಗಳು**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಮಕ್ಕಳ ಸಮಸ್ಯೆಗಳನ್ನು** ಗಂಭೀರವಾಗಿ ಪರಿಗಣಿಸಬೇಕು. ಮಕ್ಕಳ ಹಕ್ಕುಗಳ ರಕ್ಷಣೆ ಖಾತ್ರಿಪಡಿಸಲು, ಸಂಬಂಧಿಸಿದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ, ಸೂಚಿಸಿದ್ದಾರೆ. ರಾಯಚೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ, ಮಕ್ಕಳ ಸಾಗಣೆ ಮತ್ತು ಮಾರಾಟ, ಮಕ್ಕಳ ಮೇಲೆ ದೌರ್ಜನ್ಯಗಳು ನಡೆಯದಂತೆ, ಮಕ್ಕಳಿಗೆ ರಕ್ಷಣೆ ಒದಗಿಸಲು ಬದ್ಧತೆ ತೋರಬೇಕು ಎಂದು, ನಿರ್ದೇಶಿಸಿದರು.

<><><>

**ರಾಯಚೂರು ಜಿಲ್ಲೆ,** ಸಿಂಧನೂರಿನಲ್ಲಿ ಓರ್ವ ಕಿಶೋರ ಕಾರ್ಮಿಕನನ್ನು, ಬಾಲ ಕಾರ್ಮಿಕ ಯೋಜನೆಯ ನಿರ್ದೇಶಕ ಮಂಜುನಾಥ ರೆಡ್ಡಿ ನೇತೃತ್ವದ ತಂಡ, ರಕ್ಷಿಸಿ, ಅಂಗಡಿ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಿದೆ. ದುಡಿಯುವ ಮಕ್ಕಳು ಕಂಡುಬಂದಲ್ಲಿ, ಮಕ್ಕಳ ಉಚಿತ ಸಹಾಯವಾಣಿ 1–0–9–8 ಕ್ಕೆ ಮಾಹಿತಿ ನೀಡುವಂತೆ, ಅವರು ಕೋರಿದರು.

<><><>

**ಉತ್ತರಕನ್ನಡ ಜಿಲ್ಲೆ, ಯಲ್ಲಾಪುರ ತಾಲೂಕು** ಮಂಚಿಕೇರಿ ಗ್ರಾಮದ, ಗಿರಿಜಾ ಸಿದ್ದಿ ಕಳೆದ ಇಪ್ಪತ್ತೈದು ವರ್ಷಗಳಿಂದ, ಮಕ್ಕಳ ರಂಗಭೂಮಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡ, ಹಿರಿಯ ಕಲಾವಿದೆ. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಹಿರಿಯ ಜಾನಪದ ಕಲಾವಿದ ಪರಶುರಾಮ ಗಿರಿಗೋಲಿ ಸಿದ್ದಿ ಅವರ ಮಗಳಾದ ಗಿರಿಜಾ ಸಿದ್ದಿ, ಕರ್ನಾಟಕ ನಾಟಕ ಅಕಾದೆಮಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಪ್ರದೇಶ ಸಮಾಚಾರಕ್ಕಾಗಿ, ರಂಗಕರ್ಮಿ ಗಿರಿಜಾ ಸಿದ್ದಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ರಂಗಕರ್ಮಿ ಗಿರಿಜಾ ಸಿದ್ದಿ ಧ್ವನಿ 55 ಸೆಕೆಂಡುಗಳು**

<><><>

**ಸ್ಕೌಟ್ಸ್ ಮತ್ತು ಗೈಡ್ಸ್‌ನ,** ಕಬ್ಸ್ ಮತ್ತು ಬುಲ್‌ಬುಲ್‌ಗಳ, ನಾಲ್ಕು ದಿನಗಳ ರಾಜ್ಯ ಮಟ್ಟದ ಶಿಬಿರ, ಅಕ್ಟೋಬರ್ ತಿಂಗಳಿನಲ್ಲಿ ಚಿಕ್ಕಮಗಳೂರಿನ ಬಿ.ಜಿ.ಎಸ್. ಶಾಲೆ ಆವರಣದಲ್ಲಿ ನಡೆಯಲಿದೆ ಎಂದು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತ ಪಿ.ಜಿಆರ್ ಸಿಂಧ್ಯಾ ತಿಳಿಸಿದ್ದಾರೆ. ಬಿ.ಜಿ.ಎಸ್. ಶಾಲೆಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಿಂದ ಶಾಲಾ ಮಕ್ಕಳು ಪಾಲ್ಗೊಳ್ಳಲಿದ್ದಾರೆ. ಈ ಉತ್ಸವದಲ್ಲಿ ಅನೇಕ ಸ್ಪರ್ಧೆಗಳು ನಡೆಯಲಿದ್ದು, ಶಿಕ್ಷಣ ತಜ್ಞರು ಭಾಗವಹಿಸಲಿದ್ದಾರೆ ಎಂದರು.

<><><>

**ಕೇಂದ್ರ ಪ್ರವಾಸೋದ್ಯಮ ಸಚಿವಾಲಯ,** "ದೇಖೋ ಅಪ್ನಾ ದೇಶ್, ಪೀಪಲ್ಸ್ ಚಾಯ್ಸ್" ಎಂಬ, ವಿನೂತನ ಆಂದೋಲನ ಆರಂಭಿಸಿದೆ. ನಾಗರಿಕರು, ಪ್ರವಾಸಿಗರು ಆದ್ಯತೆಯ ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಲು, ಮಾಯ್ ಜಿಓವಿ ವೇದಿಕೆ ಅಡಿ, ಆನ್‌ಲೈನ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ಸೆಪ್ಟೆಂಬರ್ 15ರ ವರೆಗೆ ವೋಟ್ ಮಾಡುವ ಅವಕಾಶ ನೀಡಲಾಗಿದೆ. ಚಿತ್ರದುರ್ಗ ಜಿಲ್ಲೆಯ ಪ್ರವಾಸಿ ತಾಣಗಳ ಬಗ್ಗೆ, innovate india.mygov.in/dekho-apna-desh ನಲ್ಲಿ ವೋಟ್ ಮಾಡುವಂತೆ, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ್ ಮನವಿ ಮಾಡಿದ್ದಾರೆ.

<><><>

**ವಿಜಯನಗರ ಜಿಲ್ಲೆ, ಹೊಸಪೇಟೆಯ** ತುಂಗಭದ್ರಾ ಜಲಶಯದ 19ನೇ ಕ್ರಸ್ಟ್ ಗೇಟ್ ಚೈನ್, ತುಂಡಾಗಿ ನದಿಗೆ ಅಪಾರ ಪ್ರಮಣದ ನೀರು, ನಿನ್ನೆ ಮಧ್ಯರಾತ್ರಿಯಿಂದ ಹರಿದು ಹೋಗುತ್ತಿದೆ. ಅಂದಾಜು 35 ಸಾವಿರ ಕ್ಯೂಸೆಕ್ ನೀರು ನದಿಗೆ ಹರಿಯುತ್ತಿದ್ದು, ನದಿ ಪಾತ್ರದ ಜನ ಮುಂಜಾಗ್ರತೆ ವಹಿಸುವಂತೆ, ಕೋರಲಾಗಿದೆ. ಹಿರಿಯ ಅಧಿಕಾರಿಗಳು ಪರಿಸ್ಥಿತಿಯನ್ನು ಅವಲೋಕಿಸುತ್ತಿದ್ದಾರೆ.

<><><>

**ಹೊಸ ದಿಲ್ಲಿಯ ಕೃಷಿ ಸಂಶೋಧನಾ** ಸಂಸ್ಥೆಯಲ್ಲಿ, ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ಅಧಿಕ ಇಳುವರಿ ನೀಡುವ, ಹವಾಮಾನ ಸ್ಥಿರತೆ ಹೊಂದಿದ, ಜೈವಿಕ ಸಂವರ್ಧಿತ 61 ಬೆಳೆಗಳ 109 ತಳಿಗಳನ್ನು ಬಿಡುಗಡೆ ಮಾಡಲಿದ್ದಾರೆ. 109 ತಳಿಗಳ ಪೈಕಿ, 34 ತಳಿಗಳು ಕೃಷಿ ಬೆಳೆಗಳಾಗಿದ್ದು, 27 ಅರಣ್ಯ ಬೆಳೆಗಳಾಗಿವೆ. ರೈತರು ಮತ್ತು ವಿಜ್ಞಾನಿಗಳೊಂದಿಗೆ ಪ್ರಧಾನಮಂತ್ರಿ ಸಂವಾದ ನಡೆಸಲಿದ್ದಾರೆ.

<><><>

**ರಾಯಚೂರು** ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ನಾಳೆ ಮತ್ತು ನಾಡಿದ್ದು, ರಾಷ್ಟ್ರೀಯ ಸ್ನಾತಕೋತ್ತರ ಸಂಶೋಧನಾ ಕಮ್ಮಟವನ್ನು, ಪ್ರೇಕ್ಷಾಗೃಹದಲ್ಲಿ ಆಯೋಜಿಸಿದೆ. ಸ್ನಾತಕೋತ್ತರ ಅಧ್ಯಯನ ವಿಭಾಗದ ವಿದ್ಯಾಧಿಕಾರಿ, ಗುರುರಾಜ ಸುಂಕದ ಈ ಕುರಿತು ಮಾಹಿತಿ ನೀಡಿದ್ದು, 35 ಸಂಶೋಧನಾತ್ಮಕ ವಿಷಯಗಳ ಮೇಲೆ ಪ್ರೌಢ ಪ್ರಬಂಧಗಳ ಸಾರಾಂಶ ಹಾಗೂ 128 ಸಾರಾಂಶ ಸಹಿತ ಭಿತ್ತಿ ರೂಪಕ ಪ್ರಸ್ತುತಿಯಾಗಲಿವೆ ಎಂದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

<><><>

- **ರಾಜ್ಯದ ಘಟ್ಟ ಪ್ರದೇಶದಲ್ಲಿ,** ಭೂ ಕುಸಿತ ತಡೆಗಟ್ಟಲು, ಹೊಸ ನೀತಿ ಜಾರಿಗೆ – ಕೃಷ್ಣ ಬೈರೇಗೌಡ.
- **ಭದ್ರಾವತಿಯ ಕಬ್ಬಿಣ ಮತ್ತು ಉಕ್ಕು** ಕಾರ್ಖಾನೆ ಪುನಾರಂಭಕ್ಕೆ, ಕೇಂದ್ರದ ಸಹಕಾರ ಅಗತ್ಯ – ಎಂ.ಬಿ. ಪಾಟೀಲ.
- **ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ,** ಮಕ್ಕಳ ಸಮಸ್ಯೆ ಗಂಭೀರವಾಗಿ ಪರಿಗಣನೆ – ವೆಂಕಟೇಶ.
- **"ದೇಖೋ ಅಪ್ನಾ ದೇಶ್, ಪೀಪಲ್ಸ್ ಚಾಯ್ಸ್":** ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ, ವಿನೂತನ ಆಂದೋಲನ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 9 ಗಂಟೆ 5 ನಿಮಿಷಕ್ಕೆ.**

<><><>